# ಮೈಸೂರು ವಿಶ್ವವಿದ್ಯಾನಿಲಯ

Estd 1916
(Re-accredited by NAAC with CGPA 3.47 on four point scale with A Grade)

ಸಂಖ್ಯೆ: ಪವಿ/8.6/07/ಅಧಿಸೂಚನೆ/2015-16

ಕುಲಸಚಿವ (ಪರೀಕ್ಷಾಂಗ)ರವರ ಕಛೇರಿ
ವಿಶ್ವವಿದ್ಯಾನಿಲಯ ಕಾರ್ಯಸೌಧ
ಕ್ರಾಫರ್ಡ್ ಭವನ, ಮೈಸೂರು-570 005
**ದಿನಾಂಕ: 10-08-2021.**

## ಪರಿಷ್ಕೃತ ಅಧಿಸೂಚನೆ

ವಿಷಯ: 2 ಮತ್ತು **4**ನೇ ಸೆಮಿಸ್ಟರ್‌ನ ಸ್ನಾತಕ ಪದವಿ ಪರೀಕ್ಷಾ ಶುಲ್ಕಗಳ ಬಗ್ಗೆ.

ಉಲ್ಲೇಖ:
1. UGC D.O. No. F1-1/2020 (Secy.), dated: 16.07.2021.
2. ಘನ ಕರ್ನಾಟಕ ಸರ್ಕಾರದ ಆದೇಶ ಸಂಖ್ಯೆ:ED/197/UNE/2020, Bangalore, dated: 23.07.2021.
3. ಕುಲಸಚಿವರು, ಮೈಸೂರು ವಿಶ್ವವಿದ್ಯಾನಿಲಯ, ಮೈಸೂರು ಅವರ ಪರಿಷ್ಕೃತ ಅಧಿಸೂಚನೆ ಸಂಖ್ಯೆ:ಎಸಿ2(ಎಸ್)/363/2020-21, ದಿನಾಂಕ:01-09-2020.
4. ಕುಲಸಚಿವರು, ಮೈಸೂರು ವಿಶ್ವವಿದ್ಯಾನಿಲಯ, ಮೈಸೂರು ಅವರ ಪರಿಷ್ಕೃತ ಅಧಿಸೂಚನೆ ಸಂಖ್ಯೆ:ಎಸಿ7(ಎ)/456/2016-17, ದಿನಾಂಕ:15-02-2021.
5. ಕುಲಸಚಿವರು, ಮೈಸೂರು ವಿಶ್ವವಿದ್ಯಾನಿಲಯ, ಮೈಸೂರು ಅವರ ಟಿಪ್ಪಣಿ ಸಂಖ್ಯೆ:ಎಸಿ7(ಎ)/456/2016-17, ದಿನಾಂಕ:30-07-2021.
6. ಮಾನ್ಯ ಕುಲಪತಿಗಳ ಆದೇಶ ದಿನಾಂಕ: 06.08.2021.
7. ಈ ಕಛೇರಿ ಇದೇ ಸಮಸಂಖ್ಯೆಯ ಅಧಿಸೂಚನೆ ದಿನಾಂಕ: 05.08.2021 ಹಾಗೂ 06.08.2021.

*****

2, ಮತ್ತು 4ನೇ ಸೆಮಿಸ್ಟರ್‌ನ (CBCS-Freshers) ಸ್ನಾತಕ ಪದವಿ (U G) ಪರೀಕ್ಷಾ ಶುಲ್ಕಗಳ ಸಂಬಂಧ ಕೆಳಕಂಡಂತೆ ದಿನಾಂಕಗಳನ್ನು ನಿಗದಿಪಡಿಸಲಾಗಿದೆ.

**<u>ವಿಶೇಷ ಸೂಚನೆ:</u> 2020-21ನೇ ಶೈಕ್ಷಣಿಕ ಸಾಲಿನ 2 ಮತ್ತು 4ನೇ ಸೆಮಿಸ್ಟರ್‌ಗಳಿಗೆ ಅಂತಿಮ ($C_3$) ಪರೀಕ್ಷೆಗಳು ಇರುವುದಿಲ್ಲ. ಆದರೆ $C_1$ & $C_2$ ಆಂತರಿಕ (ಲಿಖಿತ/ಪ್ರಾಯೋಗಿಕ) ಪರೀಕ್ಷೆಗಳು (internal test) ಇರುತ್ತವೆ ಎಂದು ಈ ಮೂಲಕ ಸ್ಪಷ್ಟಪಡಿಸಿದೆ. 2 ಮತ್ತು 4ನೇ ಸೆಮಿಸ್ಟರ್‌ನ ಫಲಿತಾಂಶಗಳನ್ನು ಸದರಿ ಸೆಮಿಸ್ಟರ್‌ನ $C_1$ & $C_2$ ಆಂತರಿಕ (ಲಿಖಿತ/ಪ್ರಾಯೋಗಿಕ) ಪರೀಕ್ಷೆಗಳು (internal test) ಮತ್ತು ಹಿಂದಿನ ಸೆಮಿಸ್ಟರ್‌ಗಳ (1 ಅಥವಾ 3ನೇ ಸೆಮಿಸ್ಟರ್) ಅಂಕಗಳ ಆಧಾರದ ಮೇಲೆ ಫಲಿತಾಂಶಗಳನ್ನು ಪ್ರಕಟಿಸಲಾಗುವುದು.**

| ಕ್ರ.ಸಂ | ವಿವರುಗಳು | ಅಂತಿಮ ದಿನಾಂಕ |
|---|---|---|
| 1. | ಪರೀಕ್ಷಾ ಶುಲ್ಕ ಪಾವತಿಸಲು ಮತ್ತು ಭರ್ತಿಮಾಡಿದ ಅರ್ಜಿಗಳನ್ನು ಕಾಲೇಜಿಗೆ ಸಲ್ಲಿಸಲು | **23.08.2021** |
| 2. | ಆನ್‌ಲೈನ್ ಮೂಲಕ ಪರೀಕ್ಷಾ ಅರ್ಜಿಗಳನ್ನು ಕಾಲೇಜಿನವರು ಭರ್ತಿ ಮಾಡಲು | **26.08.2021** |
| 3. | ಪರೀಕ್ಷಾ ಶುಲ್ಕವನ್ನು ಚಲನ್ ಮೂಲಕ ಪರೀಕ್ಷಾ ಖಾತೆಗೆ **<u>ಪರೀಕ್ಷಾ ಖಾತೆ ಸಂಖ್ಯೆ: 54007591200</u>** **<u>(Examination Account)</u>** SBI, University Campus, Mysuru ಇವರಿಗೆ ಪಾವತಿಸಿ, ಚಲನ್ ಪ್ರತಿಯನ್ನು ಈ ಕಛೇರಿಗೆ ಕಳುಹಿಸಲು | **31.08.2021** |
| 5. | ಆನ್‌ಲೈನ್ ಮೂಲಕ $C_1$ & $C_2$ (continuous assessment) ಅಂಕಗಳನ್ನು ನಮೂದಿಸಲು | **04.09.2021** |

## ಪರೀಕ್ಷಾ ಶುಲ್ಕಗಳ ವಿವರಗಳು

(ಪರೀಕ್ಷಾ ಶುಲ್ಕದ ಜೊತೆಗೆ ಅಂಕಪಟ್ಟಿ ಶುಲ್ಕ ರೂ.320/– ಗಳನ್ನು ಕಡ್ಡಾಯವಾಗಿ ಪಾವತಿಸಬೇಕು)

| Sl. No. | Programme/Course | 100% Fees | 50% Fees |
|---|---|---|---|
| 1. | **B.A./B.P.A./B.A. (Fine Arts) B.V.A/B.Com :**<br>II and IV Semester whole Examination | Rs.880/- | Rs.440/- |
| 2. | **B.Sc./BCA/B.Sc. in Family & Community Science:**<br>II and IV Semester whole Examination | Rs.990/- | Rs.500/ |
| 3. | **B.B.A/B.B.M./B.S.W./B.Sc.(Speech & Hearing) & B.Sc.Ed (H & I) :**<br>II & IV Semester Whole Examination (per semester) | Rs.1,300/- | Rs.650/- |
| | **B.B.A (T&H)/B.B.A(T&T)/B.T.H./B.B.A.(T.H.M) :**<br>II & IV Semester Whole Examination (per semester) | Rs.2,500/- | Rs.1,250/- |

ಪರೀಕ್ಷಾ ಅರ್ಜಿಯು PDF Mode ನಲ್ಲಿದ್ದು ವಿದ್ಯಾರ್ಥಿ ಪೋರ್ಟ್‌ಲ್, ಕಾಲೇಜ್ ಪೋರ್ಟ್‌ಲ್ ಮತ್ತು ವಿಶ್ವವಿದ್ಯಾನಿಲಯದ ಜಾಲತಾಣದಲ್ಲಿ ಲಭ್ಯವಿದ್ದು, ವಿದ್ಯಾರ್ಥಿಗಳು ಸದರಿ ಅರ್ಜಿಯನ್ನು ಡೌನ್‌ಲೋಡ್ ಮಾಡಿಕೊಳ್ಳುವುದು.

ಎಲ್ಲಾ ಪದವಿ ವಿದ್ಯಾರ್ಥಿಗಳ ಪರೀಕ್ಷಾ ಅರ್ಜಿಗಳನ್ನು ಕಾಲೇಜಿನ ಇಂಟರ್‌ನೆಟ್ ಸೌಲಭ್ಯವನ್ನು ಬಳಸಿ ನೇರವಾಗಿ ವಿಶ್ವವಿದ್ಯಾನಿಲಯದ Web Server ಗೆ ಮಾಹಿತಿಯನ್ನು ವರ್ಗಾವಣೆ (Online Transmission) ಮಾಡುವಂತೆ/ ನಮೂದಿಸುವಂತೆ ತಿಳಿಸಲಾಗಿದೆ. ಅನಿವಾರ್ಯ ಕಾರಣದಿಂದಾಗಿ ಕಾಲೇಜಿನಲ್ಲಿ ಇಂಟರ್‌ನೆಟ್ ಸೌಲಭ್ಯವಿಲ್ಲದಿದ್ದ ಪಕ್ಷದಲ್ಲಿ ಸ್ಥಳೀಯವಾಗಿ ಲಭ್ಯವಿರುವ ಯಾವುದೇ ಕಂಪ್ಯೂಟರ್ ಕೇಂದ್ರದಿಂದಲೂ ಮಾಹಿತಿ ರವಾನಿಸಬಹುದಾಗಿದೆ.

### ಸೂಚನೆಗಳು:

1. ಉಲ್ಲೇಖ 06ರ ವಿಶ್ವವಿದ್ಯಾನಿಲಯದ ಆದೇಶದಂತೆ 2 ಮತ್ತು 4ನೇ ಸೆಮಿಸ್ಟರ್‌ನ (CBCS Freshers) ವಿದ್ಯಾರ್ಥಿಗಳಿಗೆ ಪರೀಕ್ಷಾ ಶುಲ್ಕದಲ್ಲಿ 50% ರಿಯಾಯಿತಿ ನೀಡಿದ್ದು, ಈ ರಿಯಾಯಿತಿಯು ಈ ಬಾರಿಯ ಪರೀಕ್ಷೆಗೆ ಮಾತ್ರ ಅನ್ವಯವಾಗುತ್ತದೆ.
2. ಶುಲ್ಕ ಪಾವತಿಸಲು ನಿಗದಿಪಡಿಸಿರುವ ದಿನಾಂಕವನ್ನು ಯಾವುದೇ ಕಾರಣಕ್ಕೂ ವಿಸ್ತರಿಸಲಾಗುವುದಿಲ್ಲ.
3. ಪ್ರತಿಯೊಬ್ಬ ಅಭ್ಯರ್ಥಿಯೂ ಪ್ರತಿಯೊಂದು ಚಾತುರ್ಮಾಸದ ಪರೀಕ್ಷೆಗೆ ಮೇಲೆ ನಿಗದಿಪಡಿಸಿರುವ ಪರೀಕ್ಷಾ ಶುಲ್ಕದ ಜೊತೆಗೆ ಅಂಕಪಟ್ಟಿ ಶುಲ್ಕ **ರೂ.320/–**ನ್ನು ಸಹ ಪಾವತಿಸತಕ್ಕದ್ದು. ಪರೀಕ್ಷಾ ಅರ್ಜಿಗೆ ಪ್ರತ್ಯೇಕ ಶುಲ್ಕವಿರುವುದಿಲ್ಲ.
4. ಪ್ರವರ್ಗ–1 ಮತ್ತು ಪರೀಕ್ಷಾ ಶುಲ್ಕ ಪಾವತಿಯಿಂದ ವಿನಾಯಿತಿ ಪಡೆಯಲು ಅರ್ಹರಾದ ಇತರೆ ವರ್ಗಗಳಿಗೆ (ಸಾಮಾನ್ಯ ವರ್ಗದವರನ್ನು ಒಳಗೊಂಡಂತೆ) ಸೇರಿದ ಅಭ್ಯರ್ಥಿಗಳಿಗೆ ಅವರ ಪೋಷಕರ ವಾರ್ಷಿಕ ವರಮಾನದ ಆಧಾರದ ಮೇಲೆ ಪರೀಕ್ಷಾ ಶುಲ್ಕ ಪಾವತಿಯಿಂದ ವಿನಾಯಿತಿ ನೀಡಲಾಗಿದೆ. ಆದರೂ, ಅಂತಹ ಅಭ್ಯರ್ಥಿಗಳು ನಿಗದಿಪಡಿಸಿದಂತೆ, ಅಂಕಪಟ್ಟಿ ಶುಲ್ಕ **ರೂ.320/–**ಗಳನ್ನು ಪಾವತಿ ಮಾಡಬೇಕು.

5. ಕುಲಸಚಿವರು, ಮೈಸೂರು ವಿಶ್ವವಿದ್ಯಾನಿಲಯ, ಮೈಸೂರು, ಇವರ ಸುತ್ತೋಲೆ ಸಂಖ್ಯೆ: ವಿಫ/1/9/2013-14, ದಿನಾಂಕ 25.09.2013 ಪ್ರಕಾರ 2013-14 ನೇ ಶೈಕ್ಷಣಿಕ ಸಾಲಿನಿಂದ ಪದವಿ ಕೋರ್ಸ್‌ಗಳಲ್ಲಿ ಪ್ರವೇಶಾತಿ ಪಡೆದಿರುವ ಪರಿಶಿಷ್ಟ ಜಾತಿ/ಪರಿಶಿಷ್ಟ ವರ್ಗದ ವಿದ್ಯಾರ್ಥಿಗಳ ಪೋಷಕರ ವಾರ್ಷಿಕ ವರಮಾನ ರೂ.2.5 ಲಕ್ಷದೊಳಗಿರುವ ವಿದ್ಯಾರ್ಥಿಗಳಿಂದ ಪ್ರವೇಶಾತಿ ಶುಲ್ಕ, ಬೋಧನಾ ಶುಲ್ಕ, ಪ್ರಮಾಣ ಪತ್ರ ಶುಲ್ಕ, ಅಂಕಪಟ್ಟಿ ಶುಲ್ಕ ಮತ್ತು ಅಂತಿಮ ಪದವಿ ಪ್ರಮಾಣ ಪತ್ರದ ಶುಲ್ಕಗಳನ್ನು ಕಟ್ಟಿಸಿಕೊಳ್ಳಬಾರದೆಂದು ಸರ್ಕಾರದ ಆದೇಶವಿರುತ್ತದೆ. ಇದರಂತೆ ಕ್ರಮತೆಗೆದುಕೊಳ್ಳುವುದು.

6. **ಪಾವತಿಸಬೇಕಾದ ಒಟ್ಟು ಶುಲ್ಕವನ್ನು ಪರೀಕ್ಷಾ ಖಾತೆ ಸಂಖ್ಯೆ: 54007591200 (Examination Account) ಗೆ DD ಮೂಲಕ Finance Officer, University of Mysore, Mysuru ಇವರ ಹೆಸರಿಗೆ ಸ್ಟೇಟ್ ಬ್ಯಾಂಕ್ ಆಫ್ ಇಂಡಿಯಾ, ವಿಶ್ವವಿದ್ಯಾನಿಲಯ ಶಾಖೆ, ಮೈಸೂರು ಇಲ್ಲಿ ಸಂದಾಯ ಮಾಡಿ ಮೂಲ ಪ್ರತಿಯನ್ನು ಈ ಕಛೇರಿಗೆ ಸಲ್ಲಿಸುವುದು.**

7. ಅಭ್ಯರ್ಥಿಗಳಿಂದ ನಗದಾಗಿ ಪಡೆದ ಒಟ್ಟು ಶುಲ್ಕಕ್ಕೆ ಮೇಲೆ ತಿಳಿಸಿರುವ ದಿನಾಂಕದೊಳಗಾಗಿ ನಗದು/ಡಿಡಿ ಮೂಲಕ ಹಣ ಸಂದಾಯ ಮಾಡಿ ಚಲನ್‌ನ ಪ್ರತಿಯನ್ನು ಕುಲಸಚಿವ (ಪರೀಕ್ಷಾಂಗ) ಇವರಿಗೆ ಕಳುಹಿಸುವ ಜವಾಬ್ದಾರಿ ಕಾಲೇಜಿನ ಪ್ರಾಂಶುಪಾಲರಿಗೆ ಇರುತ್ತದೆ.

8. ವಿಶ್ವವಿದ್ಯಾನಿಲಯಕ್ಕೆ ಹಣ ಸಂದಾಯ ಮಾಡುವ ಸಂದರ್ಭದಲ್ಲಿ ಚಲನ್‌ನಲ್ಲಿ ಪ್ರತಿ ಪದವಿಯ ಸೆಮಿಸ್ಟರ್‌ವಾರು ಪರೀಕ್ಷಾ ಶುಲ್ಕ ಮತ್ತು ಅಂಕಪಟ್ಟಿ ಶುಲ್ಕ ಪ್ರತ್ಯೇಕವಾಗಿ ನಮೂದಿಸಿ ವಿವರಣೆಯೊಂದಿಗೆ ಸಲ್ಲಿಸಬೇಕು.

9. ಅಭ್ಯರ್ಥನಾ ಪಟ್ಟಿಯ ಪ್ರತಿಪುಟದಲ್ಲಿ ಒಟ್ಟಾರೆ ಶುಲ್ಕವನ್ನು ಕ್ರೋಢೀಕರಿಸಿ ಅದನ್ನು ಮುಂದಿನ ಪುಟಕ್ಕೆ ಮುಂದುವರೆಸಿ ಕೊನೆಪುಟದಲ್ಲಿ ಒಟ್ಟಾರೆ ಸಂದಾಯವಾಗಬೇಕಿರುವ ಶುಲ್ಕವನ್ನು ನಮೂದಿಸಬೇಕು.

10. ಪರಿಶಿಷ್ಟಜಾತಿ ಮತ್ತು ಪರಿಶಿಷ್ಟ ವರ್ಗದ ವಿದ್ಯಾರ್ಥಿಗಳ ಪೋಷಕರ ಆದಾಯ **ರೂ.2.5 ಲಕ್ಷಗಳು ಮೀರಿದ್ದಲ್ಲಿ ಅವರುಗಳಿಂದ ಪೂರ್ಣ ಪರೀಕ್ಷಾ ಶುಲ್ಕ ಸಂಗ್ರಹಿಸುವುದು.**

11. ಸರ್ಕಾರದ ಅಧೀನ ಕಾರ್ಯದರ್ಶಿ-1, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ, ಬೆಂಗಳೂರು, ಇವರ ತಿದ್ದುಪಡಿ ಮತ್ತು ಸೇರ್ಪಡೆ ಆದೇಶ ಸಂಖ್ಯೆ:ಹಿಂವಕ 589 ಬಿಎಂಎಸ್ 2013, ದಿನಾಂಕ 06.08.2014ರ ಸರ್ಕಾರಿ ಆದೇಶದನ್ವಯ ಮತ್ತು ಕುಲಸಚಿವರು, ಮೈಸೂರು ವಿಶ್ವವಿದ್ಯಾನಿಲಯ, ಮೈಸೂರು, ಇವರ ಸುತ್ತೋಲೆ ಸಂಖ್ಯೆ:ಜಿಎಲ್.3/170/2014-15 ದಿನಾಂಕ 13.08.2014 ರಂತೆ ಸರ್ಕಾರಿ ಆದೇಶದನ್ವಯ ಹಿಂದುಳಿದ ವರ್ಗಗಳ ಅರ್ಹ ವಿದ್ಯಾರ್ಥಿಗಳು ನಿಗದಿತ ಆದಾಯದ ಮಿತಿಯೊಳಗಿರುವ ಜಾತಿ ಮತ್ತು ಆದಾಯ ಪ್ರಮಾಣಪತ್ರವನ್ನು ತಾವು ಪ್ರವೇಶ ಪಡೆಯುವ ಕಾಲೇಜು/ಶಿಕ್ಷಣ ಸಂಸ್ಥೆಗಳಿಗೆ ಪ್ರವೇಶ ಸಮಯದಲ್ಲಿ ಸಲ್ಲಿಸಿದ್ದಲ್ಲಿ, ಅಂತಹ ಕಾಲೇಜು/ಶಿಕ್ಷಣ ಸಂಸ್ಥೆಗಳು ಸರ್ಕಾರವು ಕಾಲೇಜುಗಳಿಗೆ ನಿಗದಿಪಡಿಸಿದ ಬೋಧನಾ ಶುಲ್ಕ, ಪರೀಕ್ಷಾ ಶುಲ್ಕ, ಪ್ರಯೋಗಾಲಯ ಶುಲ್ಕ, ಕ್ರೀಡಾ ಶುಲ್ಕ ಮತ್ತು ಗ್ರಂಥಾಲಯ ಶುಲ್ಕಗಳನ್ನು ವಸೂಲಿ ಮಾಡದೇ ವಿನಾಯಿತಿ ನೀಡಿ ಪ್ರವೇಶಾತಿ ನೀಡುವುದು. ನಂತರ ವಿನಾಯಿತಿ ನೀಡಿರುವ ಶುಲ್ಕಗಳನ್ನು ಮರುಪಾವತಿಸುವಂತೆ ಸಂಬಂಧಪಟ್ಟ ಕಾಲೇಜು/ಶಿಕ್ಷಣ ಸಂಸ್ಥೆಗಳು ಆನ್‌ಲೈನ್ ಮೂಲಕ ವಿದ್ಯಾರ್ಥಿಗಳಿಂದ ಸ್ವೀಕರಿಸಲಾದ ಅರ್ಜಿಗಳನ್ನು ಪರಿಶೀಲಿಸಿ, ಕ್ರೋಢೀಕೃತ ಪಟ್ಟಿಯೊಂದಿಗೆ ಪ್ರಸ್ತಾವನೆಯನ್ನು ಶುಲ್ಕ ವಿನಾಯಿತಿ ಮಂಜೂರಾತಿ ಪ್ರಾಧಿಕಾರಿಗಳಿಗೆ ಸಲ್ಲಿಸುವುದು. ಸರ್ಕಾರಿ ಆದೇಶಾನುಸಾರ ಶುಲ್ಕ ವಿನಾಯಿತಿ ನೀಡಿರುವ ವಿದ್ಯಾರ್ಥಿಗಳ ಮರುಭರಿಕೆ ಶುಲ್ಕಗಳನ್ನು ಸಂಬಂಧಿಸಿದ ಇಲಾಖೆಯಿಂದ ನಿಗದಿತ ಅವಧಿಯೊಳಗೆ ಮರುಭರಿಕೆ ಮಾಡಿಕೊಳ್ಳುವುದು ಸಂಬಂಧಿಸಿದ ಬಟವಾಡೆ ಅಧಿಕಾರಿಗಳ ಜವಾಬ್ದಾರಿಯಾಗಿರುತ್ತದೆ.

**ಪ್ರಾಂಶುಪಾಲರುಗಳಿಗೆ ಸಾಮಾನ್ಯ ಸೂಚನೆಗಳು:**

1. ಆಂತರಿಕ ಪರೀಕ್ಷೆ ತೆಗೆದುಕೊಳ್ಳುವ ವಿದ್ಯಾರ್ಥಿಗಳ ಮಾಹಿತಿಯನ್ನು ಹಾಗೂ ಪಡೆದ ಅಂಕಗಳನ್ನು Online ಮೂಲಕ ಎಂಟ್ರಿ ಮಾಡುವುದು.
2. ಪರೀಕ್ಷಾ ಶುಲ್ಕವನ್ನು ಯಾವ ಕಾರಣದಿಂದಲೂ ಮರುಪಾವತಿ ಮಾಡಲಾಗುವುದಿಲ್ಲ ಮತ್ತು ಅದನ್ನು ಮುಂದಿನ ಪರೀಕ್ಷೆಗಳಿಗೂ ಸರಿದೂಗಿಸಿಕೊಳ್ಳಲಾಗುವುದಿಲ್ಲ.

10/8/21

**ಕುಲಸಚಿವ (ಪರೀಕ್ಷಾಂಗ)**

ಗೆ:

1. ಮೈಸೂರು ವಿಶ್ವವಿದ್ಯಾನಿಲಯದ ವ್ಯಾಪ್ತಿಗೆ ಬರುವ ಮೈಸೂರು, ಮಂಡ್ಯ ಹಾಸನ ಮತ್ತು ಚಾಮರಾಜನಗರ ಜಿಲ್ಲೆಗಳ ಎಲ್ಲಾ ಪದವಿ ಕಾಲೇಜುಗಳ ಪ್ರಾಂಶುಪಾಲರುಗಳು/ನಿರ್ದೇಶಕರು/ಡೀನರು, ವಾಕ್ ಮತ್ತು ಶ್ರವಣ ಸಂಸ್ಥೆ, ಮಾನಸಗಂಗೋತ್ರಿ, ಮೈಸೂರು/ಜೆ.ಎಸ್.ಎಸ್. ಕಾಲೇಜು ವಾಕ್ ಮತ್ತು ಶ್ರವಣ ಸಂಸ್ಥೆ, ಎಂ.ಜಿ. ರಸ್ತೆ, ಚಾಮರಾಜೇಂದ್ರ ದೃಶ್ಯ ಕಲಾ ಅಕಾಡೆಮಿ (ಕಾವ) ಸಿದ್ದಾರ್ಥನಗರ, ಮೈಸೂರು.
2. ಕುಲಸಚಿವರು, ಮೈಸೂರು ವಿಶ್ವವಿದ್ಯಾನಿಲಯ, ಮೈಸೂರು.

3. ಹಣಕಾಸು ಅಧಿಕಾರಿಗಳು, ಮೈಸೂರು ವಿಶ್ವವಿದ್ಯಾನಿಲಯ, ಮೈಸೂರು.
4. ಜಿಲ್ಲಾಧಿಕಾರಿಗಳ ಕಛೇರಿ, ಹಿಂದುಳಿದ ಮತ್ತು ಅಲ್ಪಸಂಖ್ಯಾತರ ಇಲಾಖೆ, ಮೈಸೂರು/ಮಂಡ್ಯ/ಹಾಸನ/ ಚಾಮರಾಜನಗರ ಜಿಲ್ಲೆ.
5. ಜಿಲ್ಲಾ ಖಜಾನಾಧಿಕಾರಿಗಳು,ಮೈಸೂರು/ಮಂಡ್ಯ/ಹಾಸನ/ ಚಾಮರಾಜನಗರ.
6. ಆರಕ್ಷಕ ಅಧೀಕ್ಷಕರು, ಮೈಸೂರು/ಮಂಡ್ಯ/ಹಾಸನ/ ಚಾಮರಾಜನಗರ.
7. ನಿರ್ದೇಶಕರು, ವಿಶ್ವವಿದ್ಯಾನಿಲಯ ಮುದ್ರಣಾಲಯ, ಮಾನಸಗಂಗೋತ್ರಿ, ಮೈಸೂರು.
8. ಜಿಲ್ಲಾ ವಾರ್ತಾ ಮತ್ತು ಪ್ರಚಾರ ಅಧಿಕಾರಿ, ವಾರ್ತಾ ಭವನ, ಎಚ್.ಸಿ.ದಾಸಪ್ಪ ವೃತ್ತ, ಮೈಸೂರು – ಮೇಲ್ಕಂಡ ಪ್ರಕಟಣೆ ಮುಖ್ಯಾಂಶಗಳನ್ನು ಎಲ್ಲಾ ದಿನಪತ್ರಿಕೆಗಳಲ್ಲಿ ಉಚಿತವಾಗಿ ಪ್ರಚಾರ ಮಾಡಲು ಕೋರಿ ಪ್ರತಿ ಕಳುಹಿಸಲಾಗಿದೆ.
9. ನಿರ್ದೇಶಕರು, ಪ್ರಸಾರ ಭಾರತಿ ಕೇಂದ್ರ, ಯಾದವಗಿರಿ, ಮೈಸೂರು – ಈ ಅಧಿಸೂಚನೆಯ ಮುಖ್ಯಾಂಶಗಳನ್ನು ತಮ್ಮ ಬಾನುಲಿ ಹಾಗೂ ಟಿ.ವಿ ವಾಹಿನಿ ಕೇಂದ್ರದಿಂದ ವಿದ್ಯಾರ್ಥಿಗಳಿಗೆ ಅನುಕೂಲವಾಗುವ ಹಾಗೆ ಬಿತ್ತರಿಸಲು ಏರ್ಪಾಟನ್ನು ಮಾಡಲು ಕೋರಿದೆ.
10. ನಿರ್ದೇಶಕರು, ವಿದ್ಯಾರ್ಥಿ ಕ್ಷೇಮಪಾಲನಾ ವಿಭಾಗ, ಮಾನಸಗಂಗೋತ್ರಿ, ಮೈಸೂರು 570 006.
11. ನಿರ್ದೇಶಕರು, ಕಾಲೇಜು ಅಭಿವೃದ್ಧಿ ಮಂಡಳಿ, ಮೌಲ್ಯಭವನ, ಮೈಸೂರು ವಿಶ್ವವಿದ್ಯಾನಿಲಯ, ಮೈಸೂರು.
12. ಉಪಕುಲಸಚಿವರು (ಶೈಕ್ಷಣಿಕ), ಆಡಳಿತ ಶಾಖೆ, ಮೈಸೂರು ವಿಶ್ವವಿದ್ಯಾನಿಲಯ, ಮೈಸೂರು.
13. ಎಲ್ಲಾ ಉಪಕುಲಸಚಿವರು/ಸಹಾಯಕ ಕುಲಸಚಿವರು (ಪರೀಕ್ಷಾಂಗ), ಮೈಸೂರು ವಿಶ್ವವಿದ್ಯಾನಿಲಯ, ಮೈಸೂರು.
14. ಅಧ್ಯಕ್ಷರು, ಗಣಕ ವಿಜ್ಞಾನ ಅಧ್ಯಯನ ವಿಭಾಗ, ಮಾನಸಗಂಗೋತ್ರಿ, ಮೈಸೂರು–ಈ ಅಧಿಸೂಚನೆಯನ್ನು ವಿಶ್ವವಿದ್ಯಾನಿಲಯದ ವೆಬ್‌ಸೈಟ್‌ನಲ್ಲಿ ಪ್ರಕಟಿಸಲು ಕೋರಿದೆ.
15. ವ್ಯವಸ್ಥಾಪಕರು, ಮೆಟಾ–ಐ ಟೆಕ್ನಾಲಾಜೀಸ್ ಪ್ರೈವೇಟ್ ಲಿಮಿಟೆಡ್, ಪರೀಕ್ಷಾ ಭವನ, ಮೈಸೂರು ವಿಶ್ವವಿದ್ಯಾನಿಲಯ, ಮೈಸೂರು.
16. ವಿಶೇಷಾಧಿಕಾರಿಗಳು, ಪರೀಕ್ಷಾ ಸುಧಾರಣಾ ವಿಭಾಗ, ಪರೀಕ್ಷಾ ಭವನ, ಮೈಸೂರು ವಿಶ್ವವಿದ್ಯಾನಿಲಯ, ಮೈಸೂರು.
17. ಪರೀಕ್ಷಾ ವಿಭಾಗದ ಎಲ್ಲಾ ಅಧೀಕ್ಷಕರು, ಪರೀಕ್ಷಾ ವಿಭಾಗ, ಮೈಸೂರು ವಿಶ್ವವಿದ್ಯಾನಿಲಯ, ಮೈಸೂರು.
18. ಎಲ್ಲಾ ಕಾರ್ಯನಿರ್ವಾಹಕರು (ಸಾಮಾನ್ಯ ವಿಭಾಗ ಮತ್ತು ಸ್ನಾತಕಪದವಿ ವಿಭಾಗ) ಪರೀಕ್ಷಾ ವಿಭಾಗ, ಮೈಸೂರು ವಿಶ್ವವಿದ್ಯಾನಿಲಯ, ಮೈಸೂರು.
19. ಮಾನ್ಯ ಕುಲಪತಿಗಳ/ಕುಲಸಚಿವರ/ಕುಲಸಚಿವ(ಪರೀಕ್ಷಾಂಗ)/ಹಣಕಾಸು ಅಧಿಕಾರಿ ಅವರುಗಳ ಆಪ್ತ ಸಹಾಯಕರು, ಮೈಸೂರು ವಿಶ್ವವಿದ್ಯಾನಿಲಯ, ಮೈಸೂರು.
20. ಕಛೇರಿ ಪ್ರತಿ.